# <u>ಕರ್ನಾಟಕ ಸರ್ಕಾರ</u>

**ಸಂಖ್ಯೆ:** ಆರ್‌ಡಿ 46 ಎಲ್.ಜಿ.ಪಿ. 2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: .10.2024.

## <u>ಸುತ್ತೋಲೆ</u>

**ವಿಷಯ:** ಸರ್ಕಾರದ ಆದೇಶ ಸಂಖ್ಯೆ: ಅಪಜೀ 185 ಎಫ್‌ಎಎಫ್ 2011, ದಿನಾಂಕ; 05.05.2022ರ ಆದೇಶದ ಪರಿಭಾವಿತ ಅರಣ್ಯ ಪ್ರದೇಶಗಳು ಎಂದು ಅಧಿಸೂಚಿಸಿರುವ ಸರ್ವೆ ನಂಬರ್‌ಗಳ ಕುರಿತು ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯವತಿಯಿಂದ ಜಂಟಿ ಸರ್ವೆ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 46 ಎಲ್.ಜಿ.ಪಿ. 2023, ದಿನಾಂಕ: 16.02.2024.

****

ಅರಣ್ಯ ಸಂರಕ್ಷಣಾ ಕಾಯ್ದೆ, 1980ನ್ನು ಅರಣ್ಯ ಪ್ರದೇಶಗಳನ್ನು ಸಂರಕ್ಷಿಸುವ ಸಲುವಾಗಿ ಜಾರಿಗೊಳಿಸಲಾಗಿದೆ. ಕಾಯ್ದೆಯ ಕಲಂ-2ರನ್ವಯ ಅರಣ್ಯೇತರ ಉದ್ದೇಶಗಳಿಗಾಗಿ ಅರಣ್ಯ ಪ್ರದೇಶಗಳನ್ನು ಉಪಯೋಗಿಸಿಕೊಳ್ಳಲು ಕೇಂದ್ರ ಸರ್ಕಾರದ ಪೂರ್ವಾನುಮತಿಯನ್ನು ಪಡೆಯಬೇಕಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಅಪಜೀ 185 ಎಫ್‌ಎಎಫ್ 2011, ದಿನಾಂಕ; 05.05.2022ರ ಆದೇಶದಲ್ಲಿ ನಿರ್ದಿಷ್ಟಪಡಿಸಿದ ಕ್ಷೇತ್ರಿಯ ಮಾನದಂಡಗಳನ್ವಯ ಜಿಲ್ಲಾಮಟ್ಟದ ಸಮಿತಿಗಳು ಗುರುತಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುವ 3,30,186.93 ಹೆಕ್ಟೇರ್ ಪ್ರದೇಶಗಳನ್ನು ಸಂರಕ್ಷಿಸಿ ಅಭಿವೃದ್ಧಿಗೊಳಿಸುವ ದೃಷ್ಟಿಯಿಂದ "ಪರಿಭಾವಿತ ಅರಣ್ಯ ಪ್ರದೇಶಗಳು (Deemed Forests)" ಎಂದು ಅಧಿಸೂಚಿಸಿ ಆದೇಶಿಸಲಾಗಿದೆ. ಸದರಿ ಆದೇಶವನ್ನು ಅಂತರ್ಜಾಲದ ಜಾಲತಾಣ https://aranya.gov.in/aranyaacms ರಲ್ಲಿ ಪ್ರಕಟಿಸಲಾಗಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ ಆರ್‌ಡಿ 32 ಎಲ್‌ಜಿಪಿ 2022, ದಿನಾಂಕ; 28.10.2022ರಲ್ಲಿ ಅರಣ್ಯ ಇಲಾಖೆಯು ಸರ್ಕಾರಿ ಆದೇಶ ಸಂಖ್ಯೆ: ಅಪಜೀ 185 ಎಫ್‌ಎಎಫ್ 2011, ದಿನಾಂಕ; 05.05.2022ರಲ್ಲಿ ಪರಿಭಾವಿತ ಅರಣ್ಯವೆಂದು ಅಧಿಸೂಚಿಸಿರುವ 3,30,186.93 ಹೆಕ್ಟೇರ್ ಜಮೀನನ್ನು ಹೊರತುಪಡಿಸಿ, ಪುನರ್ ರಚಿತ ತಜ್ಞರ ಸಮಿತಿ-1 ಗುರುತಿಸಿದ್ದ 9,94,881.11 ಹೆಕ್ಟೇರ್ "ಪರಿಭಾವಿತ ಅರಣ್ಯ" ಜಮೀನಿನ ಪೈಕಿ 7,73,326.91 ಹೆಕ್ಟೇರ್ ಜಮೀನುಗಳ ಪೈಕಿ ವಾಸ್ತವದಲ್ಲಿ ಲಭ್ಯವಿರುವ ಜಮೀನುಗಳು, ಅವುಗಳನ್ನು ಪರಿಭಾವಿತ ಅರಣ್ಯವೆಂದು ಗುರುತಿಸಿ ಪಟ್ಟಿಗೆ ಸೇರಿಸುವ ಮುನ್ನಇದ್ದಂತಹ ಸ್ವರೂಪದಲ್ಲಿಯೇ ಮುಂದುವರೆಯುತ್ತದೆ ಎಂದು ಪರಿಗಣಿಸತಕ್ಕದ್ದೆಂದು ತಿಳಿಸಲಾಗಿದೆ.

ರಾಜ್ಯದಲ್ಲಿ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಗೊಂದಲಗಳಿರುವುದು ಸರ್ಕಾರದ ಗಮನಕ್ಕೆ ಬಂದಿರುವ ಈ ಹಿನ್ನೆಲೆಯಲ್ಲಿ ಉಲ್ಲೇಖಿತ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಗ್ರಾಮ ಪಂಚಾಯತಿ ಕಛೇರಿಯಲ್ಲಿ ಪ್ರಚುರಪಡಿಸತಕ್ಕದ್ದು ಹಾಗೂ ಸಾರ್ವಜನಿಕರಿಗೆ ಅಗತ್ಯವಾದ ಪ್ರಚಾರವನ್ನು ನೀಡುವಂತೆ ಹಾಗೂ ಕಂದಾಯ ದಾಖಲೆಗಳಲ್ಲಿ ಸೂಕ್ತ ನಮೂದುಮಾಡುವಂತೆ ಮತ್ತು ಸರ್ವೆ ನಂಬರ್‌ಗಳಲ್ಲಿ ಗೊಂದಲಗಳಿದ್ದಲ್ಲಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯವರು ಜಂಟಿ ಸರ್ವೆ ಮಾಡಿ, ಕಂದಾಯ ಇಲಾಖೆಯಿಂದ ಪ್ರಸ್ತಾವನೆಯನ್ನು ನಿಯಮಾನುಸಾರ ಮುಂದಿನ ಸೂಕ್ತ ಕ್ರಮಕ್ಕಾಗಿ ಅರಣ್ಯ ಇಲಾಖೆಗೆ ಕಳುಹಿಸುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ.

ಆದರೆ, ಕಂದಾಯ ಇಲಾಖೆ ಹಾಗೂ ಅರಣ್ಯ ಇಲಾಖೆಯಿಂದ ಸದರಿ ಜಮೀನುಗಳ ಸರ್ವೆ ಕಾರ್ಯ ಇನ್ನೂ ಪ್ರಾರಂಭಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 46 ಎಲ್.ಜಿ.ಪಿ. 2023, ದಿನಾಂಕ: 16.02.2024ರಲ್ಲಿ ಈಗಾಗಲೇ ತಿಳಿಸಿರುವ ಅಂಶಗಳನ್ನು ಮುಂದುವರಿಸುತ್ತಾ ರಾಜ್ಯದಲ್ಲಿ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಜಿಲ್ಲಾಧಿಕಾರಿಗಳು ಈ ಕೆಳಕಂಡಂತೆ

ಕ್ರಮವಹಿಸುವಂತೆ ಸೂಚಿಸಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಅಂತರ್ಜಾಲದಲ್ಲಿ ಪ್ರಕಟಿಸಿರುವ ಸರ್ಕಾರದ ಆದೇಶ ಸಂಖ್ಯೆ: ಅಪಜೀ 185 ಎಫ್ಎಎಫ್ 2011, ದಿನಾಂಕ; 05.05.2022ರ ಆದೇಶವನ್ನು https://aranya.gov.in/aranyaacms ರಿಂದ ಡೌನ್‌ಲೋಡ್ ಮಾಡಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯಿಂದ ಸಮಕ್ಷಮದಲ್ಲಿ ಸಿದ್ಧಪಡಿಸಿ ಪಟ್ಟಿಯನ್ನು ಜಿಲ್ಲಾಧಿಕಾರಿಗಳು ಮತ್ತು ಅರಣ್ಯ ಇಲಾಖೆಯಿಂದ ಜಂಟಿಯಾಗಿ ದೃಢೀಕರಿಸಿ ಗ್ರಾಮ ಪಂಚಾಯತಿ ಕಛೇರಿಯಲ್ಲಿ ಪ್ರಚುರಪಡಿಸತಕ್ಕದ್ದು ಹಾಗೂ ಸಾರ್ವಜನಿಕರಿಗೆ ಅಗತ್ಯವಾದ ಪ್ರಚಾರವನ್ನು ನೀಡತಕ್ಕದ್ದು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಅಂತರ್ಜಾಲದಲ್ಲಿ ಪ್ರಕಟಿಸಿರುವ ಸರ್ಕಾರದ ಆದೇಶ ಸಂಖ್ಯೆ: ಅಪಜೀ 185 ಎಫ್ಎಎಫ್ 2011, ದಿನಾಂಕ; 05.05.2022ರ ಆದೇಶದಲ್ಲಿ ಅಧಿಸೂಚಿಸಿರುವ ಸರ್ವೆ ನಂಬರ್‌ಗಳಲ್ಲಿ ಸಂಪೂರ್ಣ ಸರ್ವೆ ನಂಬರ್ ಪರಿಭಾವಿತ ಅರಣ್ಯ ಪ್ರದೇಶವಾಗಿದ್ದಲ್ಲಿ ಮತ್ತು ಯಾವುದೇ ವಿವಾದಗಳು ಇಲ್ಲದೇ ಇರುವ ಸರ್ವೆ ನಂಬರ್‌ಗಳನ್ನು ತಾಲ್ಲೂಕು ಮಟ್ಟದಲ್ಲಿ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಸಮಾಲೋಚಿಸಿ ಪರಿಭಾವಿತ ಅರಣ್ಯ ಪ್ರದೇಶ ಎಂದು ನಿಯಮಾನುಸಾರ ಕಂದಾಯ ದಾಖಲೆಗಳಲ್ಲಿ ಇಂಡೀಕರಣ ಮಾಡಲು ಕ್ರಮವಹಿಸತಕ್ಕದ್ದು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಪರಿಭಾವಿತ ಅರಣ್ಯ ಪ್ರದೇಶಗಳ ಬಗ್ಗೆ ಅಂತರ್ಜಾಲದಲ್ಲಿ ಪ್ರಕಟಿಸಿರುವ ಸರ್ಕಾರದ ಆದೇಶ ಸಂಖ್ಯೆ: ಅಪಜೀ 185 ಎಫ್ಎಎಫ್ 2011, ದಿನಾಂಕ; 05.05.2022ರ ಆದೇಶದಲ್ಲಿ ಪರಿಭಾವಿತ ಅರಣ್ಯ ಪ್ರದೇಶವೆಂದು ಅಧಿಸೂಚಿಸಿರುವ ಸರ್ವೆ ನಂಬರ್‌ಗಳಲ್ಲಿ ಭಾಗಶ: ಪರಿಭಾವಿತ ಅರಣ್ಯ ಪ್ರದೇಶವಿದ್ದಲ್ಲಿ ಅಥವಾ ಅದಕ್ಕೆ ಹೊಂದಿಕೊಂಡಿರುವ ಸರ್ವೆ ನಂಬರ್‌ಗಳಲ್ಲಿ ಗೊಂದಲಗಳಿದ್ದಲ್ಲಿ ಕಂದಾಯ ಇಲಾಖೆ ಮತ್ತು ಅರಣ್ಯ ಇಲಾಖೆಯವರು ಜಂಟಿ ಸರ್ವೆ ಮಾಡಿ, ಕಂದಾಯ ಇಲಾಖೆಯಿಂದ ಪ್ರಸ್ತಾವನೆಯನ್ನು ನಿಯಮಾನುಸಾರ ಮುಂದಿನ ಸೂಕ್ತ ಕ್ರಮಕ್ಕಾಗಿ ಅರಣ್ಯ ಇಲಾಖೆಗೆ ಕಳುಹಿಸತಕ್ಕದ್ದು.

| | |
|---|---|
| **(ಮಂಜುನಾಥ ಪ್ರಸಾದ್ ಎನ್.)** | **(ರಾಜೇಂದರ್ ಕುಮಾರ್ ಕಟಾರಿಯಾ)** |
| ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, | ಸರ್ಕಾರದ ಪ್ರಧಾನ ಕಾರ್ಯದರ್ಶಿ, |
| ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ | ಕಂದಾಯ ಇಲಾಖೆ. |

**ಇವರಿಗೆ**,

1. ಕಂದಾಯ ಆಯುಕ್ತರು, ಕಂದಾಯ ಆಯುಕ್ತಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಅರಣ್ಯ) ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, (ಪರಿಸರ ಮತ್ತು ಜೀವಿಶಾಸ್ತ್ರ) ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರು, ಮಲ್ಲೇಶ್ವರಂ, ಬೆಂಗಳೂರು.
5. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
6. ಆಯುಕ್ತರು, ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂದಾಖಲೆಗಳ ಉಪ ನಿರ್ದೇಶಕರು.
9. ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳು (ಜಿಲ್ಲಾಧಿಕಾರಿಗಳ ಮುಖಾಂತರ)
10. ರಾಜ್ಯದ ಎಲ್ಲಾ ತಹಶೀಲ್ದಾರರುಗಳು (ಜಿಲ್ಲಾಧಿಕಾರಿಗಳ ಮುಖಾಂತರ)
11. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ. ಬೆಂಗಳೂರು.
2. ಮಾನ್ಯ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ, ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ಭೂ ಮಂಜೂರಾತಿ & ಭೂ ಸುಧಾರಣೆ)
5. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು ಕಂದಾಯ ಇಲಾಖೆ (ಸಮನ್ವಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಮಂಜೂರಾತಿ-1 ಮತ್ತು ಭೂ ಮಂಜೂರಾತಿ-3 /ಪೀಠಾಧಿಕಾರಿಗಳು, ಭೂ ಮಂಜೂರಾತಿ-2, ಬಹುಮಹಡಿಗಳ ಕಟ್ಟಡ, ಬೆಂಗಳೂರು.